ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಕೊಳಚೆ ಶುದ್ಧೀಕರಣ ಘಟಕದ ಕಾಮಗಾರಿ ಬಗ್ಗೆ

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

079 (605) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆ, ಬೀದರ್ ತಾಲ್ಲೂಕಿನಲ್ಲಿ ಬರುವ ಗೋರನಳಿ ಗ್ರಾಮದಲ್ಲಿ ಕೊಳಚೆ ಶುದ್ಧೀಕರಣ ಘಟಕ (ಎಸ್.ಟಿ.ಪಿ.)ದ ಕಾಮಗಾರಿಯು ಯಾವಾಗ ಪ್ರಾರಂಭಗೊಂಡಿದೆ ; ಇದಕ್ಕಾಗಿ ಸರ್ಕಾರದಿಂದ ಮಂಜೂರಾದ ಅನುದಾನದ ಮೊತ್ತವೆಷ್ಟು ; ಈವರೆಗೆ ಇದಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಯ ಗುಣಮಟ್ಟವನ್ನು ಸರಿಯಾಗಿ ಪರೀಕ್ಷಿಸಲಾಗಿದೆಯೇ ; ಹಾಗಿದ್ದಲ್ಲಿ, ಇದನ್ನು ಯಾವ ರೀತಿಯಲ್ಲಿ ಯಾವಾಗ ಯಾವ ಸಂಸ್ಥೆಯಿಂದ ಕೈಗೊಳ್ಳಲಾಯಿತು ; ಈ ಕಾಮಗಾರಿಯನ್ನು ಯಾವ ವ್ಯಕ್ತಿ/ಸಂಸ್ಥೆಗೆ ನೀಡಲಾಗಿರುತ್ತದೆ ; (ಸ್ಪಷ್ಟ ವಿವರ ನೀಡುವುದು)

(ಇ) ಈ ಕೊಳಚೆ ಶುದ್ಧೀಕರಣ ಘಟಕದಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿನ ಬಾವಿ, ಬೋರ್‌ವೆಲ್‌ಗಳಲ್ಲಿನ ಅಂತರ್ಜಲ ಕಲುಷಿತಗೊಂಡು ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿರುವುದು ಹಾಗೂ ಅಕ್ಕಪಕ್ಕದ ಜಮೀನಿನಲ್ಲಿ ಬೆಳೆದ ಬೆಳೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸುಳ್ಳು ಮಾಹಿತಿಯನ್ನು ನೀಡುತ್ತಿರುವ ಬೀದರ್ ಜಿಲ್ಲೆಯ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)